ರಸ್ತೆಗಳಾವುವು? (ರಸ್ತೆವಾರು ವಿವರ ನೀಡುವುದು)

ಇ) ಇವುಗಳನ್ನು ಡಾಂಬರೀಕರಣ ಮಾಡದಿರಲು ಕಾರಣಗಳೇನು?

ಈ) ಈ ಕೆಲಸಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಎಸ್. ಎಂ. ಕೃಷ್ಣ (ಮುಖ್ಯ ಮಂತ್ರಿಗಳು):

ಅ) 6 ರಸ್ತೆಗಳು.

ಆ) ಈ 6 ರಸ್ತೆಗಳನ್ನು ಹೊರತುಪಡಿಸಿ ಉಳಿದವುಗಳಿಗೆ ಡಾಂಬರೀಕರಣ ಮಾಡಬೇಕಾಗಿದೆ.

ಇ) ಈಜಿಪುರದ ರಸ್ತೆಗಳಲ್ಲಿ ಒಳಚರಂಡಿ ವ್ಯವಸ್ಥೆಯ ಕೆಲಸವು ನಡೆಯುತ್ತಿದ್ದು, ಈ ಕೆಲಸ ಸಂಪೂರ್ಣಗೊಂಡ ನಂತರ ಹಾಗೂ ನೀರು ಸರಬರಾಜು ಕೊಳವೆಗಳ ಅಳವಡಿಕೆ ನಂತರ ಈ ರಸ್ತೆಗಳ ಡಾಂಬರೀಕರಣವನ್ನು ಕಾಮಗಾರಿ ಕಾರ್ಯಕ್ರಮದ ಪಟ್ಟಿಯಲ್ಲಿ ಸೇರಿಸಿ ಅನುಮೋದನೆಯೊಂದಿಗೆ ಡಾಂಬರೀಕರಣ ಮಾಡಲಾಗುವುದು.

ಈ) ಈ ಡಾಂಬರೀಕರಣ ಕೆಲಸಗಳನ್ನು ಹಂತ ಹಂತವಾಗಿ ಕಾಮಗಾರಿ ಕಾರ್ಯಕ್ರಮದ ಪಟ್ಟಿಗೆ ಅನುಮೋದನೆ ಹಾಗೂ ಈ ವಾರ್ಡಿಗೆ ನೀಡಲಾಗಿರುವ ಅನುದಾನವನ್ನು ಅವಲಂಬಿಸಿ ಆದ್ಯತೆ ಮೇರೆಗೆ ತಗೆದುಕೊಂಡು ಪೂರ್ಣಗೊಳಿಸಲಾಗುವುದು.

ಸೋಮವಾರಪೇಟೆ ಏತ ನೀರಾವರಿ ಯೋಜನೆ.

2978(3510)

ಶ್ರೀ ಎಂ. ಪಿ. ಅಪ್ಪಚ್ಚುರಂಜನ್ (ಸೋಮವಾರಪೇಟೆ): ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಕೊಡಗು ಜಿಲ್ಲೆ ಸೋಮವಾರಪೇಟೆಯ ಏತ ನೀರಾವರಿ ಯೋಜನೆಯ ಕೆಲಸ ಪೂರ್ಣಗೊಳ್ಳದಿರಲು ಕಾರಣಗಳೇನು?

ಆ. ಈ ಯೋಜನೆಯನ್ನು ಯಾವಾಗ ಕೈಗೆತ್ತಿಕೊಳ್ಳಲಾಯಿತು? ಈ ಕಾಮಗಾರಿಗೆ ಇದುವರೆಗೂ ಎಷ್ಟು ಹಣ ವಿಚ್ರ್ ಮಾಡಲಾಯಿತು? ಪೂರ್ಣಗೊಳಿಸಲು

ಸರ್ಕಾರ ಕೈಗೊಂಡ ಕ್ರಮಗಳೇನು? (ಪಟ್ಟಿ ನೀಡುವುದು)

ಶ್ರೀ ಎಚ್.ಕೆ.ಪಾಟೀಲ್ (ಜಲಸಂಪನ್ಮೂಲ ಸಚಿವರು):

ಅ. ವಿದ್ಯುಚ್ಛಕ್ತಿ ಒದಗಿಸಲು ಆದ ವಿಳಂಬದಿಂದಾಗಿ ಈ ಕಾಮಗಾರಿಗಳು ಪೂರ್ಣಗೊಳ್ಳಲು ವಿಳಂಬವಾಗಿದೆ.

ಆ. ಈ ಯೋಜನೆಯನ್ನು 1984-85ನೇ ಸಾಲಿನಲ್ಲಿ ಕೈಗೆತ್ತಿಕೊಳ್ಳಲಾಯಿತು. ಜೂನ್-01ರವರೆಗೆ ರೂ.5.24 ಕೋಟಿ ಹಣವನ್ನು ಖರ್ಚು ಮಾಡಲಾಗಿದೆ. ಆಗಸ್ಟ್-2001ರ ಅಂತ್ಯದ ವೇಳೆಗೆ ಪೂರ್ಣಗೊಳಿಸಲಾಗುವುದು. ಈ ಯೋಜನೆಗೆ ಬೇಕಾಗುವ ವಿದ್ಯುತ್ ಸರಬರಾಜಿಗಾಗಿ ಸರ್ಕಾರವು ಕೆ.ಪಿ.ಟಿ.ಸಿ.ಎಲ್. ಸಂಸ್ಥೆಯೊಂದಿಗೆ ಚರ್ಚಿಸಿ ಪೂರ್ಣ ಮೊತ್ತವನ್ನು ಸಂದಾಯ ಮಾಡಲಾಗಿರುತ್ತದೆ.

ಕೊಡಗು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳು.

2980(3512)

ಶ್ರೀ ಅಪ್ಪಚ್ಚು ರಂಜನ್ ಎಂ.ಪಿ.(ಸೋಮವಾರಪೇಟೆ): ಮಾನ್ಯ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2000-2001ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಲ್ಲಿ ಎಷ್ಟು ವೆಚ್ಚದಲ್ಲಿ ಸಣ್ಣ ನೀರಾವರಿ ಇಲಾಖೆಯ ಕಾಮಗಾರಿ ಕೈಗೊಳ್ಳಲಾಗಿದೆ?

ಆ) ಕೊಡಗು ಜಿಲ್ಲೆಯಲ್ಲಿ ಎಷ್ಟು ವೆಚ್ಚದ ಸಣ್ಣ ನೀರಾವರಿ ಕಾಮಗಾರಿ ಕೈಗೊಳ್ಳಲಾಗಿದೆ? (ತಾಲ್ಲೂಕುವಾರು ವಿವರ ಕೊಡುವುದು)

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು):

ಅ) 2000-01 ಸಾಲಿನಲ್ಲಿ ರಾಜ್ಯದ ಸಣ್ಣ ನೀರಾವರಿ ಕಾಮಗಾರಿಗಳಿಗಾಗಿ 12,796.13 ಲಕ್ಷ ರೂ. ವೆಚ್ಚ ಮಾಡಲಾಗಿದೆ.

ಆ) 2000-01ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಸಣ್ಣ ನೀರಾವರಿ ಕಾಮಗಾರಿಗಳಿಗಾಗಿ ರೂ.143.03 ಲಕ್ಷ ವೆಚ್ಚ ಮಾಡಲಾಗಿದೆ. ತಾಲ್ಲೂಕುವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.